**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ ಇವರ ನಡವಳಿಗಳು**

DISTRICT MAGISTRATE KODAGU * MADIKERI

ವಿಷಯ: ರಾಷ್ಟ್ರೀಯ ಹೆದ್ದಾರಿ – 275ರ ಸಂಪಾಜೆಯಿಂದ ಮಡಿಕೇರಿ ನಡುವಿನ ಕರ್ತೋಜಿ ಎಂಬಲ್ಲಿ ಭೂಕುಸಿತವಾಗುವ ಸಾಧ್ಯತೆ ಇದ್ದು, ಮುಂಜಾಗ್ರತಾ ಕ್ರಮವಾಗಿ ವಾಹನ ಸಂಚಾರ ನಿರ್ಬಂಧಿಸುವ ಕುರಿತು.

ಉಲ್ಲೇಖ: ಸಹಾಯಕ ಕಾರ್ಯಪಾಲಕ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ, ಮಡಿಕೇರಿ ರವರ ಪತ್ರ ಸಂ: 94, ದಿನಾಂಕ 18.07.2024

------

**ಪ್ರಸ್ತಾವನೆ:**

ರಾಷ್ಟ್ರೀಯ ಹೆದ್ದಾರಿ – 275ರ ಸಂಪಾಜೆಯಿಂದ ಮಡಿಕೇರಿ ನಡುವಿನ ಕಿ.ಮೀ. 90.05 ರಿಂದ 90.10ರ ಕರ್ತೋಜಿ ಬಳಿ ತೀವ್ರ ಮಳೆಯಿಂದಾಗಿ ರಸ್ತೆಯ ಬಲಬದಿ ಗುಡ್ಡ ಕುಸಿಯುವ ಸಾಧ್ಯತೆ ಇದ್ದು, ಸಾರ್ವಜನಿಕ ಹಿತಾಸಕ್ತಿಯಿಂದ ಈ ಭಾಗದಲ್ಲಿ ದಿನಾಂಕ 18.07.2024 ರಿಂದ 22.07.2024ರ ವರೆಗೆ ಪ್ರತಿ ದಿನ ರಾತ್ರಿ 8.00 ಗಂಟೆಯಿಂದ ಮರುದಿನ ಬೆಳಗ್ಗೆ 6.00 ಗಂಟೆಯವರೆಗೆ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ನಿರ್ಬಂಧಿಸಲು ಉಲ್ಲೇಖದ ಪತ್ರದಂತೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ, ಮಡಿಕೇರಿ ರವರು ಕೋರಿರುತ್ತಾರೆ.

ಹಾಲಿ ಗಮನಿಸಿದಂತೆ ಜಿಲ್ಲೆಯಲ್ಲಿ ಕಳೆದ ಕೆಲ ದಿನಗಳಿಂದ ತೀವ್ರ ಮಳೆಯಾಗುತ್ತಿದ್ದು, ಹವಾಮಾನ ಇಲಾಖೆ ನೀಡಿರುವ ವರದಿಯಂತೆ ಜಿಲ್ಲೆಯಲ್ಲಿ ಮುಂದಿನ ನಾಲ್ಕು ದಿನಗಳ ಕಾಲ ಅತಿ ಹೆಚ್ಚಿನ ಮಳೆಯಾಗುವ ಎಚ್ಚರಿಕೆ ಇರುತ್ತದೆ. ಉಲ್ಲೇಖದ ಪತ್ರದಲ್ಲಿ ಕೋರಿದಂತೆ ಹಾಗೂ ಹವಾಮಾನ ಇಲಾಖೆಯ ವರದಿಯಂತೆ ಸಾರ್ವಜನಿಕ ಹಿತದೃಷ್ಟಿಯಿಂದ ರಾಷ್ಟ್ರೀಯ ಹೆದ್ದಾರಿ – 275ರ ಸಂಪಾಜೆಯಿಂದ ಮಡಿಕೇರಿ ನಡುವಿನ ಕರ್ತೋಜಿ ಎಂಬ ಭಾಗದಲ್ಲಿ ಮುಂಜಾಗ್ರತಾ ಕ್ರಮವಾಗಿ ತುರ್ತು ಸೇವೆಗಳ ಮತ್ತು ಪ್ರಕೃತಿ ವಿಕೋಪ ಸಂಬಂಧಿತ ಕಾರ್ಯದ ನಿಮಿತ್ತ ಕಾರ್ಯನಿರ್ವಹಿಸುವ ಅಧಿಕಾರಿ / ಸಿಬ್ಬಂದಿಗಳು ಸಂಚರಿಸುವ ವಾಹನಗಳನ್ನು ಹೊರತುಪಡಿಸಿ, ಉಳಿದಂತೆ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ದಿನಾಂಕ 18.07.2024 ರಿಂದ 22.07.2024ರ ವರೆಗೆ ಪ್ರತಿ ದಿನ ರಾತ್ರಿ 8.00 ಗಂಟೆಯಿಂದ ಮರುದಿನ ಬೆಳಗ್ಗೆ 6.00 ಗಂಟೆಯವರೆಗೆ ನಿರ್ಬಂಧಿಸುವುದು ಸೂಕ್ತವೆಂದು ಕಂಡುಬಂದ ಕಾರಣ ಈ ಕೆಳಕಂಡಂತೆ ಆದೇಶ.

## ಆದೇಶ ಸಂಖ್ಯೆ:ಎಂಎಜಿ/125/2024-25, ದಿನಾಂಕ: 18-07-2024

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ರಾಷ್ಟ್ರೀಯ ಹೆದ್ದಾರಿ – 275ರ ಸಂಪಾಜೆಯಿಂದ ಮಡಿಕೇರಿ ನಡುವಿನ ಕಿ.ಮೀ. 90.05 ರಿಂದ 90.10ರ ಕರ್ತೋಜಿ ಬಳಿ ತೀವ್ರ ಮಳೆಯಿಂದಾಗಿ ರಸ್ತೆಯ ಬಲಬದಿ ಗುಡ್ಡ ಕುಸಿಯುವ ಸಾಧ್ಯತೆ ಇದ್ದು, ಸಾರ್ವಜನಿಕ ಹಿತದೃಷ್ಟಿಯಿಂದ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ 2023ರ ಕಲಂ 163 ಮತ್ತು ಮೋಟಾರು ವಾಹನ ಕಾಯ್ದೆ 1988ರ ಕಲಂ 115 ಹಾಗೂ ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989ರ (ತಿದ್ದುಪಡಿ ನಿಯಮಗಳು 1990) ನಿಯಮ 221ಎ(5)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, **ವೆಂಕಟ್ ರಾಜಾ, ಭಾ.ಆ.ಸೇ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಕೊಡಗು ಜಿಲ್ಲೆ, ಮಡಿಕೇರಿ ಆದ ನಾನು ರಾಷ್ಟ್ರೀಯ ಹೆದ್ದಾರಿ – 275ರ ಸಂಪಾಜೆಯಿಂದ ಮಡಿಕೇರಿ ನಡುವಿನ ಕರ್ತೋಜಿಯ ಕಿ..ಮೀ. 90.10ರ ಭಾಗದಲ್ಲಿ ಮುಂಜಾಗ್ರತಾ ಕ್ರಮವಾಗಿ ತುರ್ತು ಸೇವೆಗಳ ಮತ್ತು ಪ್ರಕೃತಿ ವಿಕೋಪ ಸಂಬಂಧಿತ ಕಾರ್ಯದ ನಿಮಿತ್ತ ಕಾರ್ಯನಿರ್ವಹಿಸುವ ಅಧಿಕಾರಿ / ಸಿಬ್ಬಂದಿಗಳು ಸಂಚರಿಸುವ ವಾಹನಗಳನ್ನು ಹೊರತುಪಡಿಸಿ, ಉಳಿದಂತೆ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ದಿನಾಂಕ 18.07.2024 ರಿಂದ 22.07.2024ರ ವರೆಗೆ ಪ್ರತಿ ದಿನ ರಾತ್ರಿ 8.00 ಗಂಟೆಯಿಂದ ಮರುದಿನ ಬೆಳಗ್ಗೆ 6.00 ಗಂಟೆಯವರೆಗೆ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ನಿರ್ಬಂಧಿಸಿ ಆದೇಶಿಸಿರುತ್ತೇನೆ.**

ಜಿಲ್ಲೆಯ ಮುಖಾಂತರ ಮೈಸೂರು, ಬೆಂಗಳೂರು ಮುಂತಾದ ಸ್ಥಳಗಳಿಗೆ ಸಂಚರಿಸುವ ವಾಹನಗಳು ಬದಲಿ ರಸ್ತೆಯಾದ ಚಾರ್ಮಾಡಿ ಘಾಟ್ – ಕೊಟ್ಟಿಗೆಹಾರ ಮಾರ್ಗವನ್ನು ಬಳಸಬಹುದಾಗಿದೆ.

ಈ ಬಗ್ಗೆ ಮೋಟಾರ್ ವಾಹನ ಕಾಯ್ದೆ 1988ರ ಸೆಕ್ಷನ್ 116 ಹಾಗೂ ಕರ್ನಾಟಕ ಮೋಟಾರ್ ವಾಹನ ನಿಯಮಗಳು 1989ರ (ತಿದ್ದುಪಡಿ ನಿಯಮಗಳು 1990) ನಿಯಮ 221ಎ (2)ರಂತೆ ಅವಶ್ಯವಿರುವ ಸಂಜ್ಞೆ / ಸೂಚನಾ ಫಲಕವನ್ನು ಅಳವಡಿಸಲು ಪೊಲೀಸ್ ಅಧೀಕ್ಷಕರು, ಕೊಡಗು ಜಿಲ್ಲೆ, ಮಡಿಕೇರಿ ಹಾಗೂ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ, ಮಡಿಕೇರಿ ಇವರಿಗೆ ಸೂಚನೆ ನೀಡಿದೆ.

DISTRICT MAGISTRATE KODAGU • MADIKERI

18/7/2024

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.
Deputy Commissioner & District Magistrate
Kodagu District Madikeri

ಪ್ರತಿಯನ್ನು:

1. ಮಾನ್ಯ ಜಿಲ್ಲಾ ಸತ್ರ ನ್ಯಾಯಾಧೀಶರು, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ಇವರಿಗೆ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
3. ಆರಕ್ಷಕ ಅಧೀಕ್ಷಕರು, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಸೂಕ್ತ ಕ್ರಮಕ್ಕಾಗಿ.
4. ಉಪವಿಭಾಗೀಯ ದಂಡಾಧಿಕಾರಿಗಳು, ಮಡಿಕೇರಿ ಉಪವಿಭಾಗ, ಮಡಿಕೇರಿ
5. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ, ಮಡಿಕೇರಿ ಇವರಿಗೆ ಸೂಕ್ತ ಕ್ರಮಕ್ಕಾಗಿ
6. ತಾಲ್ಲೂಕು ದಂಡಾಧಿಕಾರಿಗಳು, ಮಡಿಕೇರಿ, ವಿರಾಜಪೇಟೆ, ಕುಶಾಲನಗರ, ಪೊನ್ನಂಪೇಟೆ ಮತ್ತು ಸೋಮವಾರಪೇಟೆ ತಾಲ್ಲೂಕು ಇವರಿಗೆ ಸೂಕ್ತ ಕ್ರಮಕ್ಕಾಗಿ.
7. ಪ್ರಾದೇಶಿಕ ಸಾರಿಗೆ ಅಧಿಕಾರಿ, ಕೊಡಗು ಮಡಿಕೇರಿ ಇವರಿಗೆ ಸೂಕ್ತ ಕ್ರಮಕ್ಕಾಗಿ
8. ಘಟಕ ವ್ಯವಸ್ಥಾಪಕರು, ಕೆ.ಎಸ್.ಆರ್.ಟಿ.ಸಿ. ಘಟಕ, ಮಡಿಕೇರಿ ಇವರಿಗೆ ಸೂಕ್ತ ಕ್ರಮಕ್ಕಾಗಿ.
9. ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಸ್ಥಳೀಯ ಪತ್ರಿಕೆ ಮತ್ತು ಮಾಧ್ಯಮಗಳಲ್ಲಿ ಸರ್ಕಾರಿ ಸುದ್ದಿರೂಪದಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.